ಚಿತ್ರದುರ್ಗ ನಗರದಲ್ಲಿ ತೋಟಗಾರಿಕೆ ಇಲಾಖೆ ವತಿಯಿಂದ ಗಾಜಿನ ಮನೆ ನಿರ್ಮಾಣ

133 (1509) ಶ್ರೀ ಬಸವರಾಜನ್ ಎಸ್.ಕೆ (ಚಿತ್ರದುರ್ಗ) : ಮಾನ್ಯ ತೋಟಗಾರಿಕೆ ಮತ್ತು ಬಂಧೀಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿತ್ರದುರ್ಗ ನಗರದಲ್ಲಿ ತೋಟಗಾರಿಕೆ ಇಲಾಖೆ ವತಿಯಿಂದ ಗಾಜಿನ ಮನೆ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಗಾಜಿನ ಮನೆ ನಿರ್ಮಿಸಲು ನಗರದ ಯಾವ ಭಾಗದಲ್ಲಿ ಸ್ಥಳ ಗುರುತಿಸಲಾಗಿದೆ;

ಇ) ಹಾಗಿದ್ದಲ್ಲಿ, ಗಾಜಿನ ಮನೆಯನ್ನು ಯಾವಾಗ ನಿರ್ಮಿಸ ಲಾಗುವುದು;

ಈ) ಈ ಗಾಜಿನ ಮನೆ ನಿರ್ಮಾಣಕ್ಕಾಗಿ ಸರ್ಕಾರ ಅನುಸರಿಸುವ ರೂಪರೇಷೆಗಳೇನು (ರೂಪುರೇಷೆಗಳ ಪ್ರತಿಯನ್ನು ನೀಡುವುದು)

ಉ) ಗಾಜಿನ ಮನೆ ನಿರ್ಮಾಣಕ್ಕಾಗಿ ಸರ್ಕಾರ ಅನುದಾನವನ್ನು ನಿಗಧಿಪಡಿಸಿದೆಯೇ;

ಊ) ಹಾಗಿದ್ದಲ್ಲಿ, ಎಷ್ಟು ಅನುದಾನವನ್ನು ನಿಗಧಿಪಡಿಸಲಾಗಿದೆ (ವಿವರ ನೀಡುವುದು);

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು) :

ಅ) ಇಲ್ಲ.

ಆ) ಇ) ಈ) ಉ) ಮತ್ತು ಊ) ಉದ್ಭವಿಸುವುದಿಲ್ಲ.

ಶ್ರೀ ಬಸವರಾಜನ್ ಎಸ್.ಕೆ (ಚಿತ್ರದುರ್ಗ) : ಮಾನ್ಯ ಅಧ್ಯಕ್ಷರೆ, ಮಾನ್ಯ ಸಚಿವರು ಉತ್ತರವನ್ನು ಒದಗಿಸಿದ್ದಾರೆ. ಆದರ್ಕೆ, ಚಿತ್ರದುರ್ಗ ನಗರದಲ್ಲಿ ಗಾಜಿನ ಮನೆ ಬಹಳ ಅವಶ್ಯಕತೆ ಇದೆ. ಪ್ರತಿ ವರ್ಷ ಫಲಪುಷ್ಪ ಪ್ರದರ್ಶನ ಐದು ದಿನಗಳ ಕಾಲ ನಡೆಯುತ್ತದೆ. ಆ ಸಂದರ್ಭದಲ್ಲಿ ಮಳೆಗಾಲವಿರುವು ದರಿಂದ ಈಗಿರುವ ವ್ಯವಸ್ಥೆಯಲ್ಲಿ ಮಾಡುವುದು ಬಹಳ ಕಷ್ಟವಾಗುತ್ತಿದೆ. ಬಹಳ ಜನ ನಾಗರೀಕರು, ರೈತರು, ಅದರಲ್ಲಿ ಭಾಗವಹಿಸುತ್ತಿದ್ದಾರೆ ಮತ್ತು ತೋಟಗಾರಿಕೆ ಬೆಳೆಗಳನ್ನು ಹೆಚ್ಚು ಬೆಳೆಯುತ್ತಿರುವುದರಿಂದ ರೈತರಿಗೆ ಆಗಾಗ್ಗೆ

ಅಲ್ಲಿ ಮಾಹಿತಿಯನ್ನು ಮತ್ತು ಪ್ರಾತ್ಯಕ್ಷಿಕೆಯನ್ನು ನಡೆಸಬೇಕಾಗುತ್ತದೆ. ಸಾರ್ವಜನಿಕ ಕಾರ್ಯಕ್ರಮಗಳಿಗೂ ಸಹ ಅನುಕೂಲವಾಗುತ್ತದೆ. ಆ ಕಾರಣ ತಾವೂ ಸರ್ಕಾರಕ್ಕೆ ಒತ್ತಾಯ ಮಾಡಿ ಗಾಜಿನ ಮನೆಯನ್ನು ನಿರ್ಮಾಣ ಮಾಡಿಸಲಿಕ್ಕೆ ತಾವು ಸರ್ಕಾರಕ್ಕೆ ನಿರ್ದೇಶನ ನೀಡಬೇಕೆಂದು ತಮ್ಮಲ್ಲಿ ಕೇಳಿಕೊಳ್ಳುತ್ತಿದ್ದೇನೆ.

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರು) : ಮಾನ್ಯ ಅಧ್ಯಕ್ಷರೆ, ಚಿತ್ರದುರ್ಗ ನಗರದಲ್ಲಿ ಗಾಜಿನ ಮನೆ ನಿರ್ಮಾಣ ಮಾಡಬೇಕೆಂದು ಮಾನ್ಯ ಸದಸ್ಯರು ಕೇಳಿದ ಪ್ರಶ್ನೆಗೆ ಇವತ್ತಿನ ಪರಿಸ್ಥಿತಿಯನ್ನು ನನಗೆ ತಿಳಿಸಿ ಹೇಳಿದರು. ಮಾನ್ಯ ಸದಸ್ಯರು ಏನು ಸದನದ ಗಮನಕ್ಕೆ ತರುತ್ತಿದ್ದಾರೋ ಬರುವ ದಿನಗಳಲ್ಲಿ ನೀಲಿ ನಕ್ಷೆಯನ್ನು ತಯಾರು ಮಾಡುತ್ತೇವೆ. ಅದರ ಜೊತೆಗೆ ಶಾಸಕರು ಆ ಸ್ಥಳಕ್ಕೆ ಭೇಟಿ ಕೊಟ್ಟಾಗ, ಅಲ್ಲಿ ಆರು ಎಕರೆ ನಮ್ಮ ಜಮೀನು ಇದೆ. ಶಾಸಕರೂ ಹಣವನ್ನು ಕೊಡುತ್ತೇವೆಂದು ಹೇಳಿದ್ದಾರೆ ಮತ್ತು ನಮ್ಮ ಇಲಾಖೆಯಿಂದಲೂ ಹಣವನ್ನು ಹಾಕಿ ಮುಂದಿನ ದಿನಗಳಲ್ಲಿ ಗಾಜಿನ ಮನೆಯನ್ನು ನಿರ್ಮಾಣ ಮಾಡುವಂಥ ಕಾರ್ಯಕ್ರಮ ವನ್ನು ಹಾಕಿಕೊಳ್ಳುತ್ತೇವೆಂದು ಮಾನ್ಯ ಸದಸ್ಯರಿಗೆ ಹೇಳುವುದಕ್ಕೆ ಬಯಸುತ್ತೇನೆ.

ಕೊಳ್ಳೇಗಾಲದಿಂದ ಮಲೈಮಹದೇಶ್ವರ ಬೆಟ್ಟಕ್ಕೆ ಹೋಗುವ ರಸ್ತೆ ಅಭಿವೃದ್ಧಿ

135 (1126) ಶ್ರೀ ನರೇಂದ್ರ ಆರ್. (ಹನೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಳ್ಳೇಗಾಲದಿಂದ ಮಲೈಮಹದೇಶ್ವರ ಬೆಟ್ಟಕ್ಕೆ ಹೋಗುವ ರಸ್ತೆಗಳು ತುಂಬಾ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಅವುಗಳ ದುರಸ್ಥಿ ಹಾಗೂ ನಿರ್ವಹಣೆ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು (ವಿವರ ಒದಗಿಸುವುದು);

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಗಮನಕ್ಕೆ ಬಂದಿದೆ.

ಆ) ಕೊಳ್ಳೇಗಾಲದ ಮಲೈ ಮಹದೇಶ್ವರ ಬೆಟ್ಟದ ರಸ್ತೆಯು ರಾಹೆ–79 ಆಗಿದ್ದು ಸರಪಳಿ 59–59 ರಿಂದ 156.60 ಕಿಮೀ ವರೆಗೆ ಒಟ್ಟು 97.31